ಸ್ಪೆಷಲ್ ನ್ಯೂಟ್ರಿಷನ್ ಪ್ರೋಗ್ರಾಂನ್ನು ಪರಿವರ್ತಿಸಿ ಅಂಗನವಾಡಿ ಶಿಶುವಿಹಾರಗಳನ್ನಾಗಿ ಮಾಡುವುದು

೨೯೬೮. ಶ್ರೀ ಬಿ. ಆರ್. ನೀಲಕಂಠಪ್ಪ (ತುರುವೇಕೆರೆ).—ಮಾನ್ಯ ಸಮಾಜ ಕಲ್ಯಾಣ, ಯುವಜನ ಸೇವಾ ಮತ್ತು ಕ್ರೀಡಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸ್ಪೆಷಲ್ ನ್ಯೂಟ್ರಿಷನ್ ಪ್ರೋಗ್ರಾಂ ಅನ್ನು ಪರಿವರ್ತಿಸಿ ಅಂಗನವಾಡಿ ಶಿಶುವಿಹಾರಗಳನ್ನು (ಐಸಿಡಿಎಸ್) ಪ್ರಾರಂಭಿಸಲು ಸರ್ಕಾರಕ್ಕೆ ಮನವಿಗಳೇನಾದರೂ ಬಂದಿವೆಯೇ ?

ಆ) ಈ ಮನವಿಯನ್ನು ಅನುಷ್ಠಾನಕ್ಕೆ ತರಲು ಸರ್ಕಾರದವರು ಯಾವ ಯೋಜನೆಯನ್ನು ರೂಪಿಸಲು ಕ್ರಮಕೈಗೊಳ್ಳಲಾಗಿದೆ ?

ಇ) ಈ ಪರಿವರ್ತನ ಯೋಜನೆಯಿಂದ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳಿಗೆ ಯಾವ ತರದ ಹಣದ ಖರ್ಚಿಲ್ಲದಿರುವುದರಿಂದ ಇದನ್ನು ಕಾರ್ಯರೂಪಕ್ಕೆ ತರಲು ಇರುವ ತೊಂದರೆಗಳೇನು ?

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಮಾಜ ಕಲ್ಯಾಣ ಮಂತ್ರಿಗಳು).—

ಅ) ಬಂದಿದೆ.

ಆ) ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) 'ಆ' ಭಾಗದಲ್ಲಿ ತಿಳಿಸಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ಶೇ. ೧೮ ವೀಸಲಾತಿ ಸೌಲಭ್ಯಗಳನ್ನು ಸಮರ್ಪಕವಾಗಿ ತುರ್ತಾಗಿ ಜಾರಿಗೆ ತರುವುದು.

೨೯೭೬. ಶ್ರೀ ಬಿ.ಲಕ್ಕಪ್ಪ (ಚಿಕ್ಕನಾಯಕನ ಹಳ್ಳಿ).—ಮಾನ್ಯ ಸಮಾಜ ಕಲ್ಯಾಣ, ಯುವಜನ ಸೇವಾ ಮತ್ತು ಕ್ರೀಡಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ತಾಲ್ಲೂಕು ಮಟ್ಟದಲ್ಲಿ ಶೇ. ೫೦ಕ್ಕಿಂತ ಹೆಚ್ಚು ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನರಿರುವ ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯನ್ನು ಪ್ರತ್ಯೇಕ ಮತ್ತು ಸ್ವತಂತ್ರ ಇಲಾಖೆಯನ್ನಾಗಿ ಪುನರ್ ರಚಿಸುವುದಾಗಿಯೂ, ೪೦,೦೦೦-೦೦ ಕ್ಕಿಂತ ಹೆಚ್ಚು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನರನ್ನು ಹೊಂದಿರುವ ತಾಲ್ಲೂಕುಗಳನ್ನು ೨೦೦೮ನೇ ಹಂತದಲ್ಲಿ ಈ ಇಲಾಖೆಯನ್ನು ಪ್ರತ್ಯೇಕ ಮತ್ತು ಸ್ವತಂತ್ರ ಇಲಾಖೆಯನ್ನಾಗಿ ತಾಲ್ಲೂಕು ಮಟ್ಟದಲ್ಲಿ ಪುನರ್ ರಚಿಸುವ ಬಗ್ಗೆ ಸದನದಲ್ಲಿ ಘೋಷಿಸಿದ್ದು ನಿಜವೇ ?

ಆ) ಇದರ ಪೈಕಿ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯನ್ನು ಪ್ರತ್ಯೇಕ ಮತ್ತು ಸ್ವತಂತ್ರ ಇಲಾಖೆಗಳನ್ನಾಗಿ ಪುನರ್ ರಚಿಸಲಾಗಿದೆ.

ಶ್ರೀ ಪಿ. ಜಿ. ಆರ್. ಸಿಂಧ್ಯಾ (ಸಮಾಜ ಕಲ್ಯಾಣ ಸಚಿವರು).—

ಅ) ಹೌದು

ಆ) ೧ ತುಮಕೂರು ತಾಲ್ಲೂಕು
೨ ಮಧುಗಿರಿ ತಾಲ್ಲೂಕು

ರಾಜ್ಯದಲ್ಲಿ ಕುರಿ ತಳಿ ಅಭಿವೃದ್ಧಿ ಕೇಂದ್ರಗಳನ್ನು ಸ್ಥಾಪಿಸುವುದು

೩೦೨೩. ಶ್ರೀ ಪಿ. ಸಿ. ಮುನಿಸ್ವಾಮಯ್ಯ (ದೇವನಹಳ್ಳಿ).—ಮಾನ್ಯ ರೇಷ್ಮೆ ಮತ್ತು ಪಶು ಸಂಗೋಪನೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿರುವ ಕುರಿಗಳ ಸಂಖ್ಯೆ ಎಷ್ಟು ? ಇತ್ತೀಚೆಗೆ ಇದರ ಬಗ್ಗೆ ಗಣತಿ ಏನಾದರೂ ನಡೆಸಲಾಗಿದೆಯೇ ?